125

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್. ಪಿ. ಸುಧಾಮ ದಾಸ್ ರವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಸೂಚನೆ:**

ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆಯ ಎಂ. ಕೊತ್ತೂರು ಮೊರಾರ್ಜಿ ವಸತಿ ಶಾಲೆಯ ಮಕ್ಕಳು ದಿನಾಂಕ:10.12.2024ರಂದು ಉತ್ತರ ಕನ್ನಡ ಜಿಲ್ಲೆಯ ಮುರಡೇಶ್ವರಕ್ಕೆ ಪ್ರವಾಸ ತೆರಳಿದ ಸಂದರ್ಭದಲ್ಲಿ ಸಮುದ್ರದ ನೀರಿನಲ್ಲಿ ಆಟವಾಡುವಾಗ ಪ್ರವಾಸದಲ್ಲಿ ಪಾಲ್ಗೊಂಡಿದ್ದ ಶಿಕ್ಷಕರು ಹಾಗೂ ಮೇಲ್ವಿಚಾರಕರ ಬೇಜವಾಬ್ದಾರಿಯಿಂದ ವಿದ್ಯಾರ್ಥಿನಿಯರಾದ ಶ್ರಾವಂತಿ, ದೀಕ್ಷಾ, ಲಾವಣ್ಯ ಹಾಗೂ ವಂದನಾರವರು ಮೃತ ಪಟ್ಟಿದ್ದು, ಈ ಸಂಬಂಧ ಶಾಲೆಯ ಮುಖ್ಯೋಪಾಧ್ಯಾಯಿನಿ ಸಸ್ಪೆಂಡ್ ಗೆ ಒಳಗಾಗಿ ಪೋಲೀಸ್ ಪ್ರಕರಣ ದಾಖಲಾಗಿದ್ದರೂ ಸರ್ಕಾರ ಸದರಿ ಪ್ರಕರಣ ಕುರಿತಂತೆ ಈ ಕೆಳಕಂಡ ವಿಷಯಗಳ ಕುರಿತಂತೆ ;

i) ಮೊರಾರ್ಜಿ ದೇಸಾಯಿ ವಸತಿ ಹಾಗೂ ಇನ್ನಿತರ ಸರ್ಕಾರಿ ವಸತಿ ಶಾಲೆಯ ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ಪ್ರವಾಸಕ್ಕೆ ತರೆಳುವ ಸಂದರ್ಭದಲ್ಲಿ ಇಂತಹ ದುರಂತಗಳು ಮರುಕಳಿಸದಂತೆ ತೆಗೆದುಕೊಳ್ಳಬೇಕಾದ ಮುಂಜಾಗರೂಕತಾ ಕ್ರಮಗಳ ಕುರಿತು ನಿಯಮ ರೂಪಿಸಲು.

ii) ಮೇಲಿನ ಪ್ರಕರಣದಲ್ಲಿ ಬಹುತೇಕ ಸಿಬ್ಬಂದಿಗಳು ಕೇವಲ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕಾರಣ ಹಾಗೂ ಗುತ್ತಿಗೆ ಸಿಬ್ಬಂದಿಗಳಿಂದ ಇಂತಹ ಸಂದರ್ಭದಲ್ಲಿ ಜವಾಬ್ದಾರಿಯ ಕೆಲಸದ ನಿರ್ವಹಣೆಯಲ್ಲಿ ತೋರಿದ ನಿರ್ಲಕ್ಷದ ಕಾರಣ ದುರಂತ ಸಂಭವಿಸಿರುವುದು ನಿರ್ವಿವಾದ. ಈ ಕಾರಣ ಇನ್ನಾದರು ಸರ್ಕಾರ ಬಹಳ ವರ್ಷಗಳಿಂದ ಮೊರಾರ್ಜಿ ವಸತಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಲ್ಲಿ ಗುತ್ತಿಗೆ ಶಿಕ್ಷಕರ ಬದಲಾಗಿ ಖಾಯಂ ಶಿಕ್ಷಕರ ನೇಮಕಕ್ಕೆ ತ್ವರಿತ ಕ್ರಮ ಜರುಗಿಸಲು ಆಗ್ರಹಿಸುವುದಕ್ಕಾಗಿ.

**ಉತ್ತರ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 821 (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-144 ಮತ್ತು ಹಿಂದುಳಿದ ವರ್ಗ-174) ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 211920 ವಿದ್ಯಾರ್ಥಿಗಳ ಸಂಖ್ಯೆ ಮಂಜೂರಾಗಿದ್ದು ಈ ಪೈಕಿ 200710 ವಿದ್ಯಾರ್ಥಿಗಳು ದಾಖಲಾಗಿ ವ್ಯಾಸಂಗ ಮಾಡುತ್ತಿದ್ದಾರೆ.

ಮುಳಬಾಗಿಲು ತಾಲ್ಲೂಕು ಕೋಲಾರ ಜಿಲ್ಲೆಯ ಎಂ. ಕೊತ್ತೂರು ಮೊರಾರ್ಜಿ ದೇಸಾಯಿ ವಸತಿ ಶಾಲೆಯ 9 ನೇ ತರಗತಿಯ ವಿದ್ಯಾರ್ಥಿಗಳನ್ನು ಶೈಕ್ಷಣಿಕ ಪ್ರವಾಸಕ್ಕೆ ಕರೆದುಕೊಂಡು ಹೋಗಿದ್ದು, ದಿನಾಂಕ 10.12.2024 ರಂದು ಉತ್ತರ ಕನ್ನಡ ಜಿಲ್ಲೆಯ ಮುರಡೇಶ್ವರಕ್ಕೆ ತೆರಳಿದ ಸಂದರ್ಭದಲ್ಲಿ ಸಮುದ್ರ ನೀರಿನಲ್ಲಿ ಆಟವಾಡುವಾಗ ನೀರಿನಲ್ಲಿ ಕೊಚ್ಚಿ ಹೋಗಿ 4 ವಿದ್ಯಾರ್ಥಿಗಳು ಮೃತ ಹೊಂದಿದ್ದು, 3 ವಿದ್ಯಾರ್ಥಿಗಳು ಅಪಾಯದಿಂದ ಪಾರಾಗಿ ಗುಣಮುಖರಾಗಿರುತ್ತಾರೆ. ಸದರಿ ವಸತಿ ಶಾಲೆಯ ಪ್ರಾಂಶುಪಾಲರನ್ನು ಅಮಾನತುಗೊಳಿಸಿದ್ದು, ಪೋಲೀಸ್ ಇಲಾಖೆಯಲ್ಲಿ ಪ್ರಕರಣ ದಾಖಲಿಸಲಾಗಿರುತ್ತದೆ. ಅತಿಥಿ ಶಿಕ್ಷಕರನ್ನು/ಗ್ರೂಪ್-ಡಿ ಸಿಬ್ಬಂದಿಯನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ. ಮೃತಪಟ್ಟ ವಿದ್ಯಾರ್ಥಿಯ ಪೋಷಕರಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ತಲಾ ರೂ.5 ಲಕ್ಷಗಳಂತೆ ಪರಿಹಾರ ಧನವನ್ನು ನೀಡಲಾಗಿರುತ್ತದೆ.

ದಿನಾಂಕ:10-12-2024 ಮುರಡೇಶ್ವರದ ಸಮುದ್ರ ತೀರದಲ್ಲಿ ಈ ದುರ್ಘಟನೆಯ ಹಿನ್ನಲೆಯಲ್ಲಿ ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ನಡೆಯದಂತೆ ಸುರಕ್ಷತೆಯ ಹಿತದೃಷ್ಠಿಯಿಂದ ಮುನ್ನೆಚ್ಚರಿಕೆ ಕ್ರಮವಾಗಿ ಸರ್ಕಾರದ ಆದೇಶ ಸಂಖ್ಯೆ:ಸಕಇ 37 ಮೊದೇಶಾ 2017, ದಿನಾಂಕ:08-02-2017 ರಲ್ಲಿ ಸರ್ಕಾರದ ಆದೇಶದಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ನು ಒಳಗೊಂಡಂತೆ ಮತ್ತು ಇನ್ನಿತರೆ ಮಾರ್ಗ ಸೂಚಿಗಳನ್ನು, ಪ್ರವಾಸಕ್ಕೆ ತೆರಳುವ ಮುನ್ನ, ಪ್ರವಾಸದ ಸಮಯದಲ್ಲಿ ಹಾಗೂ ಪ್ರವಾಸದಿಂದ ಆಗಮಿಸಿದ ನಂತರ ಅನುಸರಿಸಬೇಕಾದ ಕ್ರಮಗಳನ್ನು ಪರಿಷ್ಕರಿಸಿ ಸರ್ಕಾರ ಆದೇಶ ಹೊರಡಿಸಲು ಕ್ರಮವಹಿಸಲಾಗುತ್ತಿದೆ.

**ಪ್ರವಾಸಕ್ಕೆ ತೆರಳುವ ಮುನ್ನ ಅನುಸರಿಸಬೇಕಾದ ಕ್ರಮಗಳು:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ/ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರವಾಸ ಕಾರ್ಯಕ್ರಮ ಅನುಷ್ಠಾನಗೊಳಿಸಲು ಮಕ್ಕಳ ಸುರಕ್ಷತೆಯ ಹಿತದೃಷ್ಠಿಯಿಂದ ಸರ್ಕಾರದ ಆದೇಶ ಸಂಖ್ಯೆ:ಸಕಇ 37 ಮೊದೇಶಾ 2017, ದಿನಾಂಕ:08-02-2017 ದಲ್ಲಿ ಹೊರಡಿಸಲಾದ ಮಾರ್ಗಸೂಚಿಗಳು ಮತ್ತು ಇನ್ನಿತರ ಮುನ್ನೆಚ್ಚರಿಕೆಯ ಕ್ರಮಗಳು ಈ ಕೆಳಗಿನಂತಿವೆ.

1. ಶೈಕ್ಷಣಿಕ ಪ್ರವಾಸ ಕರೆದುಕೊಂಡು ಹೋಗಲು ಉದ್ದೇಶಿಸಿರುವ ಸ್ಥಳ ಮತ್ತು ದಿನಾಂಕವನ್ನು ತಿಳಿಸಿ ಕೇಂದ್ರ ಕಛೇರಿಯಿಂದ ಪೂರ್ವಾನುಮತಿ ಪಡೆಯತಕ್ಕದ್ದು.
2. ಅನುಮತಿ ನೀಡಿದ ಸ್ಥಳಗಳಿಗೆ ಮಾತ್ರ ಮಕ್ಕಳನ್ನು ಕರೆದುಕೊಂಡು ಹೋಗುವುದು.
3. ಟೆಂಪೋ, ಮ್ಯಾಕ್ಸಿ ಕ್ಯಾಬ್, ಜೀಪ್ ಅಥವಾ ಇನ್ನಿತರೆ ವಾಹನಗಳಲ್ಲಿ ಶೈಕ್ಷಣಿಕ ಪ್ರವಾಸ ಮಾಡುವುದನ್ನು ಕಡ್ಡಾಯವಾಗಿ ನಿರ್ಬಂಧಿಸಿದೆ.
4. ಬಸ್‌ನಲ್ಲಿರುವ ಆಸನಗಳಿಗಿಂತ ಹೆಚ್ಚು ಮಕ್ಕಳನ್ನು ಕರೆದುಕೊಂಡು ಹೋಗಬಾರದು.
5. ಮಕ್ಕಳ ಸುರಕ್ಷತೆಯ ಬಗ್ಗೆ ಹೆಚ್ಚಿನ ಗಮನ ಕೊಡುವುದು. ಈ ಬಗ್ಗೆ ತಂದೆ/ತಾಯಿ/ಪೋಷಕರ ಸಹಮತಿಯನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.
6. ಶೈಕ್ಷಣಿಕ ಪ್ರವಾಸದ ನಂತರ ಖರ್ಚಿನ ಬಗ್ಗೆ ಸರಿಯಾದ ಲೆಕ್ಕಪತ್ರ ನಿರ್ವಹಿಸುವುದು.
7. ಶೈಕ್ಷಣಿಕ ಪ್ರವಾಸ ನಿಗಧಿಪಡಿಸಿದ ಅವಧಿ ಮತ್ತು ಅನುಮತಿ ನೀಡಿದ ಅವಧಿಗಿಂತ ಹೆಚ್ಚು ಇರಬಾರದು.
8. ಪೋಷಕರ ಒಪ್ಪಿಗೆ ಪತ್ರ ಪಡೆದು ವಿದ್ಯಾರ್ಥಿಗಳನ್ನು ಪ್ರವಾಸಕ್ಕೆ ಕರೆದುಕೊಂಡು ಹೋಗುವುದು.
9. ಯಾವುದೇ ಕಾರಣಕ್ಕೂ ಬಲವಂತವಾಗಿ ಮಕ್ಕಳನ್ನು ಪ್ರವಾಸಕ್ಕೆ ಕರೆದುಕೊಂಡು ಹೋಗಬಾರದು.
10. ಯಾವುದೇ ಕಾರಣಕ್ಕೂ ಬಲವಂತವಾಗಿ ಮಕ್ಕಳನ್ನು ಪ್ರವಾಸಕ್ಕೆ ಕರೆದುಕೊಂಡು ಹೋಗಲು ಪೋಷಕರಿಂದ ಪ್ರವಾಸಕ್ಕಾಗಿ ಹಣ ಸಂಗ್ರಹಿಸತಕ್ಕದ್ದಲ್ಲ.
11. ರಾತ್ರಿ ವೇಳೆಯಲ್ಲಿ ಯಾವುದೇ ಕಾರಣಕ್ಕೂ ಪ್ರಯಾಣ ಮಾಡಬಾರದು.
12. ಅಧಿಕೃತವಾಗಿ ನಿಗಧಿಪಡಿಸಿದ ಸ್ಥಳಗಳಲ್ಲಿ ಮಾತ್ರ ರಾತ್ರಿ ವೇಳೆಯಲ್ಲಿ ವಾಸ್ತವ್ಯ ಮಾಡುವುದು.
13. ಪ್ರತಿ 20 ವಿದ್ಯಾರ್ಥಿಗಳಿಗೆ ಒಬ್ಬರು ಶಿಕ್ಷಕ/ಶಿಕ್ಷಕಿಯನ್ನು ಪ್ರವಾಸಕ್ಕೆ ನಿಯೋಜಿಸುವುದು.
14. ಹೆಣ್ಣು ಮಕ್ಕಳಿದ್ದಲ್ಲಿ, ಕಡ್ಡಾಯವಾಗಿ ಮಹಿಳಾ ಶಿಕ್ಷಕಿ/ಸಿಬ್ಬಂದಿಯನ್ನು ಪ್ರವಾಸಕ್ಕೆ ನಿಯೋಜಿಸುವುದು.
15. ಉಳಿದ ಶಿಕ್ಷಕರು ಎಂದಿನಂತೆ ತರಗತಿಗಳನ್ನು ನಡೆಸುವುದು.
16. ಡಿಸೆಂಬರ್ ಮಾಹೆಯ ಒಳಗೆ ಪ್ರವಾಸ ಕೈಗೊಳ್ಳಬೇಕು.
17. ವಿದ್ಯಾರ್ಥಿಗಳ ಸುರಕ್ಷತೆಗಾಗಿ ಹಾಗೂ ಪ್ರವಾಸ ಸಂದರ್ಭದಲ್ಲಿ ಮಕ್ಕಳ ಆರೋಗ್ಯದಲ್ಲಿ ಏರು-ಪೇರು ಆದಲ್ಲಿ ಮಕ್ಕಳನ್ನು ತುರ್ತು ಚಿಕಿತ್ಸೆ ಉದ್ದೇಶದಿಂದ ಮಹಿಳಾ ಶುಶ್ರೂಷಕಿಯನ್ನು ಕರೆದುಕೊಂಡು ಹೋಗುವುದು ಕಡ್ಡಾಯವಾಗಿರುತ್ತದೆ.
18. ಈ ಸಂಬಂಧ ತಗುಲುವ ವೆಚ್ಚವನ್ನು ಆಯಾ ವಸತಿ ಶಾಲೆ/ವಸತಿ ಪದವಿ ಪೂರ್ವ ಕಾಲೇಜುಗಳ ನಿರ್ವಹಣಾ ಅನುದಾನದ ವೆಚ್ಚದಲ್ಲಿ ಭರಿಸತಕ್ಕದ್ದು.

**ಪ್ರವಾಸದ ಸಮಯದಲ್ಲಿ ಅನುಸರಿಸಬೇಕಾದ ಕ್ರಮಗಳು:**

1. ಶೈಕ್ಷಣಿಕ ಪ್ರವಾಸಕ್ಕೆ ಹೊರಡುವ ಮುನ್ನ ಉಪಹಾರವನ್ನು ಸೇವಿಸಿ ಮಧ್ಯಾಹ್ನದ ಊಟವನ್ನು ಶಾಲೆಯಲ್ಲಿಯೇ ಸಿದ್ಧಪಡಿಸಿಕೊಂಡು ಜೊತೆಯಲ್ಲಿಯೇ ತೆಗೆದುಕೊಂಡು ಹೋಗತಕ್ಕದ್ದು.
2. ಪ್ರವಾಸದ ಮೊದಲನೇ ದಿನದ ರಾತ್ರಿಯ ಊಟ, ಎರಡನೇ ದಿನದ ಬೆಳಗಿನ ಉಪಹಾರ ಮತ್ತು ಮಧ್ಯಾಹ್ನದ ಊಟವನ್ನು ಶುಚಿಯಾಗಿರುವ ಉಪಹಾರ ಗೃಹ/ಭೋಜನಾಲಯಗಳಲ್ಲಿ ಮಾಡತಕ್ಕದ್ದು.
3. ಹಿತ ಮಿತವಾದ ಆಹಾರ ಸೇವಿಸಿ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಹಾಗೂ ರಸ್ತೆ ಬದಿಯ ಹೊರಗಿನ ಅಂಗಡಿಗಳ ಕಲುಷಿತ ಆಹಾರ ಪದಾರ್ಥ ಹಾಗೂ ನೀರನ್ನು ಸೇವಿಸಬಾರದು.
4. ಪ್ರವಾಸಕ್ಕೆ ತೆರಳಿದ ಎಲ್ಲಾ ವಿದ್ಯಾರ್ಥಿಗಳು ಒಂದು ತಂಡವಾಗಿ ಪ್ರವಾಸ ಸ್ಥಳಗಳನ್ನು ವೀಕ್ಷಿಸುವುದು ಹಾಗೂ ಶಿಕ್ಷಕರು ತಂಡ ಚದುರದಂತೆ ಸೂಕ್ತ ಗಮನವಹಿಸುವುದು. ಒಂದು ವೇಳೆ ತಂಡದಿಂದ ತಪ್ಪಿಸಿಕೊಂಡಲ್ಲಿ/ದಾರಿ ತಪ್ಪಿದಲ್ಲಿ ಶಿಕ್ಷಕರ/ಪೋಷಕರ/ಸಹಾಯವಾಣಿ-112 ದೂರವಾಣಿ ಸಂಖ್ಯೆಗೆ ತಕ್ಷಣವೇ ಕರೆ ಮಾಡುವಂತೆ ಅಗತ್ಯ ತಿಳುವಳಿಕೆ ನೀಡುವುದು.
5. ರಾತ್ರಿ ವೇಳೆಯಲ್ಲಿ ಯಾವುದೇ ಕಾರಣಕ್ಕೂ ಪ್ರಯಾಣ ಮಾಡಬಾರದು.
6. ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆಯಿಂದ (KSTDC) ಪ್ರಮಾಣೀಕೃತ ವಸತಿ ಗೃಹಗಳಲ್ಲಿ ಅಥವಾ ಹತ್ತಿರದ ಕ್ರೈಸ್ ವಸತಿ ಶಾಲೆಗಳಲ್ಲಿ ಮಾತ್ರ ರಾತ್ರಿ ವೇಳೆಯಲ್ಲಿ ವ್ಯಾಸ್ತವ್ಯ ಮಾಡುವುದು.
7. ನದಿ, ಭಾವಿ, ಕೊಳ, ಕೆರೆಕಟ್ಟೆ, ಕಾಲುವೆ, ಸಮುದ್ರ ತೀರ ಮುಂತಾದ ನೀರಿನ ಆಳಮಟ್ಟ ಹೆಚ್ಚಿರುವ ಹಾಗೂ ಜೀವಹಾನಿಯಾಗುವಂತಹ ಸ್ಥಳಗಳಿಗೆ ಇಳಿಯುವಂತಿಲ್ಲ ಹಾಗೂ ಈಜಾಡಲು ಹೋಗುವಂತಿಲ್ಲ.
8. ಪ್ರವಾಸದ ಸ್ಥಳದಲ್ಲಿರುವ ಐತಿಹಾಸಿಕ ಸ್ಥಳಗಳಿಗೆ ಭೇಟಿ ನೀಡಿದಾಗ ಸ್ಥಳೀಯ ಪ್ರಮಾಣೀಕೃತ ಮಾರ್ಗದರ್ಶಕರು(ಗೈಡ್)/ಸ್ಥಳೀಯ ಸರ್ಕಾರಿ/ಸ್ವಾಮ್ಯದ ಸಂಸ್ಥೆಗಳ ಮಾರ್ಗದರ್ಶನದಲ್ಲಿ ಸೂಚನೆಗಳಂತೆ ಸ್ಥಳವನ್ನು ವೀಕ್ಷಿಸುವುದು ಹಾಗೂ ಅಗತ್ಯ ಸುರಕ್ಷತಾ ಕ್ರಮಗಳನ್ನು ಪಾಲಿಸುವುದು.
9. ಅಪಾಯಕಾರಿ ಸೆಲ್ಫಿ ಸ್ಥಳಗಳು(Selfie Point), ಶಿಖರದ ತುದಿ, ಜಾರು ಪ್ರದೇಶ, ಜಲಪಾತದ ಅಂಚಿನ ಸ್ಥಳಗಳು ಹಾಗೂ ಇನ್ನಿತರ ಅಪಾಯಕಾರಿ ಸ್ಥಳ/ಪ್ರದೇಶಗಳಿಗೆ ವಿದ್ಯಾರ್ಥಿಗಳು ಪ್ರವೇಶಿಸದಂತೆ ಕ್ರಮವಹಿಸುವುದು.
10. ಪ್ರಯಾಣದ ಹಾಗೂ ಸ್ಥಳ ವೀಕ್ಷಣೆ ಸಮಯದಲ್ಲಿ ಜೀವಕ್ಕೆ ಅಪಾಯಕಾರಿವಾಗುವಂತಹ ಹಾಗೂ ದೈಹಿಕವಾಗಿ ಗಾಯಗೊಳ್ಳುವ ಯಾವುದೇ ಮನರಂಜನೆ/ಸಾಹಸ ಚಟುವಟಿಕೆಗಳನ್ನು ಕೈಗೊಳ್ಳುವಂತಿಲ್ಲ.
11. ಪ್ರವಾಸದ ಕೊನೆಯದಿನದಂದು ಸೂರ್ಯಾಸ್ತದೊಳಗೆ ತಮ್ಮ ವಸತಿ ಶಾಲೆ/ಕಾಲೇಜುಗಳಿಗೆ ತಲುಪತಕ್ಕದ್ದು.

**ಪ್ರವಾಸದಿಂದ ಆಗಮಿಸಿದ ನಂತರ ಅನುಸರಿಸಬೇಕಾದ ಕ್ರಮಗಳು:**

1. ಪ್ರವಾಸದಿಂದ ಆಗಮಿಸಿದ ವಿದ್ಯಾರ್ಥಿಗಳ ಹಾಗೂ ಸಿಬ್ಬಂದಿಗಳ ಆರೋಗ್ಯವನ್ನು ಖಾತರಿಪಡಿಸಿಕೊಳ್ಳುವುದು.
2. ಪ್ರವಾಸದ ನಂತರ ಪ್ರಾಂಶುಪಾಲರು ಶೈಕ್ಷಣಿಕ ಪ್ರವಾಸದ ಕುರಿತು ಸಂಕ್ಷಿಪ್ತ ವರದಿಯನ್ನು ಆಯಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಹಾಗೂ ಕೇಂದ್ರ ಕಛೇರಿಗೆ ಸಲ್ಲಿಸುವುದು.
3. ಪ್ರವಾಸದ ನಂತರ ವಿದ್ಯಾರ್ಥಿಗಳಿಗೆ ಪ್ರವಾಸದ ವಿಷಯದ ಕುರಿತು ವಿವಿಧ ಸ್ಪರ್ಧೆಗಳನ್ನು ಏರ್ಪಡಿಸುವುದು.
4. ಶೈಕ್ಷಣಿಕ ಪ್ರವಾಸದ ನಂತರ ಖರ್ಚಿನ ಬಗ್ಗೆ ಸರಿಯಾದ ಲೆಕ್ಕಪತ್ರ ನಿರ್ವಹಿಸುವುದು.

ಪ್ರವಾಸಕ್ಕೆ ತೆರಳಿದ ಪ್ರಾಂಶುಪಾಲರು/ಶಿಕ್ಷಕರು/ಸಿಬ್ಬಂದಿಗಳು ಪರಸ್ಪರ ಸಮನ್ವಯತೆಯಿಂದ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸುವುದು. ಪ್ರವಾಸದ ಸಮಯದಲ್ಲಿ ಸಂಭವಿಸುವ ಯಾವುದೇ ಅವಘಡಗಳಿಗೆ ಶಾಲೆಯ ಮುಖ್ಯಸ್ಥರು ಹಾಗೂ ಪ್ರವಾಸಕ್ಕೆ ನಿಯೋಜಿಸಿರುವ ಶಿಕ್ಷಕ/ಸಿಬ್ಬಂದಿ ನೇರ ಹೊಣೆಗಾರರಾಗಿರುತ್ತಾರೆ.

ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಿಗೆ 19141 ಬೋಧಕ/ಬೋಧಕೇತರ, ಗ್ರೂಪ್ "ಡಿ" ವೃಂದದ ಹುದ್ದೆಗಳು ಮಂಜೂರಾಗಿದ್ದು, ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿದೆ.

| ವೃಂದ | ಮಂಜೂರಾದ ಸಂಖ್ಯೆ: | ಖಾಯಂ ಸಿಬ್ಬಂದಿಗಳ ಸಂಖ್ಯೆ | ಅತಿಥಿ ಶಿಕ್ಷಕರು/ ಉಪನ್ಯಾಸಕರ ಸಂಖ್ಯೆ | ಹೊರಸಂಪನ್ಮೂಲ ಸಿಬ್ಬಂದಿಗಳ ಸಂಖ್ಯೆ |
|---|---|---|---|---|
| **ಬೋಧಕ ಸಿಬ್ಬಂದಿ** | 8857 | 5403 | 2602 | 470 |
| **ಬೋಧಕೇತರ ಸಿಬ್ಬಂದಿ** | 2282 | 1119 | 0 | 841 |
| **ಗ್ರೂಪ್ 'ಡಿ'** | 8002 | 5 | 0 | 7929 |
| **ಒಟ್ಟು** | **19141** | **6527** | **2602** | **9240** |

ಮೇಲ್ಕಂಡಂತೆ ಮಂಜೂರಾಗಿರುವ ಹುದ್ದೆಗಳ ಎದುರಾಗಿ 6527 ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಬಾಕಿ ಉಳಿದ ಹುದ್ದೆಗಳಲ್ಲಿ ಅತಿಥಿ ಶಿಕ್ಷಕರು/ಉಪನ್ಯಾಸಕರು ಹಾಗೂ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ 2756 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ ಆರ್ಥಿಕ ಇಲಾಖೆಯು 875 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿರುತ್ತದೆ. ಅದರಂತೆ, ಸರ್ಕಾರದ ಆದೇಶ ಸಂಖ್ಯೆ: ಸಕಇ/ಎಂಡಿಎಸ್/418/2022 ದಿನಾಂಕ:29.06.2024ರಂದು ಆದೇಶವನ್ನು ಹೊರಡಿಸಲಾಗಿದೆ.

ಉಳಿಕೆ ಮೂಲವೃಂದದ 875 ಹಾಗೂ ಕಲ್ಯಾಣ ಕರ್ನಾಟಕ ವೃಂದದ 555 ಬೋಧಕ/ಬೋಧಕೇತರ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದಿಂದ ಭರ್ತಿ ಮಾಡಲು ರೋಸ್ಟರ್ ಬಿಂದುಗಳನ್ನು ನಿಗದಿಪಡಿಸಿ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಶಿಕ್ಷಕರ ನೇಮಕಾತಿಯಲ್ಲಿ TET (Teacher Eligibility Test) ಪರೀಕ್ಷೆಯನ್ನು ಅಳವಡಿಸಿಕೊಳ್ಳಲು ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಿದ್ದುಪಡಿ ಮಾಡಲು ಕರಡು ಅಧಿಸೂಚನೆಯನ್ನು ಹೊರಡಿಸಿದ್ದು, ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ನೇಮಕಾತಿಗೆ ನಿಯಮಾನುಸಾರ ಕ್ರಮವಹಿಸಲಾಗುವುದು. ಮುಂದುವರೆದು, ವಸತಿ ಶಾಲೆಗಳಲ್ಲಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆದು ಹಂತ ಹಂತವಾಗಿ ನಿಯಮಾನುಸಾರ ನೇಮಕಾತಿಗೆ ಕ್ರಮವಹಿಸಲಾಗುವುದು.

**ಸಕಇ 329 ಎಂಡಿಎಸ್ 2024**

**(ಡಾ. ಹೆಚ್.ಸಿ. ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು